**All India Radio: Bangalore**
**Regional Bulletin In Kannada**
**01.06.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಗೃಹಲಕ್ಷ್ಮೀ ಹಣ ಒಂದು ವಾರದೊಳಗೆ ಫಲಾನುಭವಿಗಳ ಖಾತೆಗೆ : ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸ್ಪಷ್ಟನೆ
2. ಆಲಮಟ್ಟಿ ಆಣೆಕಟ್ಟಿನ ಎತ್ತರ ಹೆಚ್ಚಳ ವಿಚಾರ : ಕಾನೂನು ತಜ್ಞರ ಜೊತೆ ಚರ್ಚಿಸಿ ನಿರ್ಧಾರ : ಸಚಿವ ಎಂ.ಬಿ.ಪಾಟೀಲ್
3. ಹೇಮಾವತಿ ಲಿಂಕ್ ಕೆನಾಲ್ ಕಾಮಗಾರಿ ವಿರೋಧಿಸಿ ಪ್ರತಿಭಟನೆ : ಶಾಸಕ ಸುರೇಶ್ ಗೌಡ ಸೇರಿ ೧೧ ಮಂದಿ ವಿರುದ್ಧ ಎಫ್.ಐ.ಆರ್.
4. ಪಶ್ಚಿಮಘಟ್ಟ ಧಾರಣಾ ಸಾಮರ್ಥ್ಯ ಅಧ್ಯಯನ ನಡೆಸಲು ಸರ್ಕಾರ ನಿರ್ಧಾರ

<><><><>

ಗೃಹಲಕ್ಷ್ಮಿ ಹಣ ಒಂದು ವಾರದೊಳಗೆ ಫಲಾನುಭವಿಗಳ ಖಾತೆಗೆ ಜಮೆ ಆಗಲಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು ಗೃಹಕ್ಷ್ಮಿ ಹಣ ವಿಳಂಬವಾಗಿಲ್ಲ ಎಂದು ಸಮರ್ಥಿಸಿಕೊಂಡಿದ್ದಾರೆ. ಏಪ್ರಿಲ್ ತಿಂಗಳಿನ ಬಿಲ್ ಮಾಡಲಾಗಿದ್ದು ವಾರದೊಳಗೆ ಫಲಾನುಭವಿಗಳ ಖಾತೆಗೆ ಜಮೆ ಆಗಲಿದೆ ಎಂದು ಹೇಳಿದ್ದಾರೆ. ಇದೇ ವೇಳೆ ಉಡುಪಿ ಜಿಲ್ಲೆ ಉಸ್ತುವಾರಿ ಕುರಿತಂತೆ ಪ್ರತಿಕ್ರಿಯಿಸಿದ ಅವರು ಜಿಲ್ಲೆಯಲ್ಲಿ ಮಳೆ ಮುನ್ನೆಚ್ಚರಿಕೆ ಹಾಗೂ ಅಹಿತಕರ ಘಟನೆ ಆಗದಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಮೀನುಗಾರರ ಬಗ್ಗೆ ವಿಶೇಷವಾಗಿ ಗಮನ ಹರಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**ಧ್ವನಿ : ಲಕ್ಷ್ಮೀ ಹೆಬ್ಬಾಳ್ಕರ್**

<><><><>

ವಿಜಯಪುರ ಜಿಲ್ಲೆಯಲ್ಲಿ ಒಟ್ಟು ೧೨೨ ಇಂದಿರಾ ಕ್ಯಾಂಟೀನ್‌ಗಳನ್ನು ತೆರೆಯಲಾಗಿದ್ದು, ಜಿಲ್ಲಾಸ್ಪತ್ರೆ ಆವರಣದಲ್ಲಿ ಆರಂಭವಾಗಿರುವ ಇಂದಿರಾ ಕ್ಯಾಂಟಿನ್ ಆಸ್ಪತ್ರೆಗೆ ಬರುವ ಬಡವರಿಗೆ

ಅನುಕೂಲವಾಗಲಿದೆ ಎಂದು ಜಿಲ್ಲಾ ಉಸ್ತುವಾರಿ ಹಾಗೂ ಕೈಗಾರಿಕಾ ಸಚಿವ ಎಂ ಬಿ ಪಾಟೀಲ್ ಹೇಳಿದ್ದಾರೆ. ವಿಜಯಪುರ ಜಿಲ್ಲಾಸ್ಪತ್ರೆಯ ಆವರಣದಲ್ಲಿ ನೂತನ ಇಂದಿರಾ ಕ್ಯಾಂಟೀನ್ ಉದ್ಘಾಟಿಸಿ ಸುದ್ದಿಗಾರರೊಂದಿಗೆ ಮಾತಾನಾಡಿದ ಅವರು, ಆಲಮಟ್ಟಿ ಆಣೆಕಟ್ಟನ್ನು ಒಂದು ಮೀಟರ್ ಹೆಚ್ಚಳಕ್ಕೆ ಯಾವುದೇ ಅಡ್ಡಿ ಇಲ್ಲ ಎಂಬ ಸಚಿವ ಶಿವಾನಂದ್ ಪಾಟೀಲ್ ಹೇಳಿಕೆ ಬಗ್ಗೆ ಮಾಹಿತಿ ಇಲ್ಲ ಎಂದು ತಿಳಿಸಿದ್ದಾರೆ. ಆಣೆಕಟ್ಟಿನ ಎತ್ತರ ಹೆಚ್ಚಳ ಜೊತೆಗೆ ಭೂಸ್ವಾಧೀನ ಮಾಡಿಕೊಳ್ಳಬೇಕಾಗುತ್ತದೆ. ಒಂದು ಮೀಟರ್ ಅಂತರದಲ್ಲಿ ಬರುವ ಹಳ್ಳಿಗಳ ಸ್ಥಳಾಂತರವೂ ಮಾಡಬೇಕಾಗಬಹುದು. ಈ ಬಗ್ಗೆ ಕಾನೂನು ಸಲಹೆಗಾರ ಮೋಹನ್ ಕಾತರಕಿ ಜೊತೆಗೆ ಮಾತನಾಡಿ ಸರ್ಕಾರ ತೀರ್ಮಾನ ತೆಗೆದುಕೊಳ್ಳಲಿದೆ ಎಂದು ಸಚಿವ ಎಂ ಬಿ ಪಾಟೀಲ್ ಸ್ಪಷ್ಟಪಡಿಸಿದ್ದಾರೆ.

**ಧ್ವನಿ : ಸಚಿವ ಎಂ.ಬಿ.ಪಾಟೀಲ್**

<><><><>

ರಾಜ್ಯದಲ್ಲಿ ಕೊರೋನ ಮಾರ್ಗಸೂಚಿಯಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು ಕೇಂದ್ರ ಸರ್ಕಾರ ಇದು ಅಪಾಯಕಾರಿ ಅಲ್ಲ ಎಂದು ಮಾಹಿತಿ ನೀಡಿದೆ. ಹೀಗಾಗಿ ಜನ ಭಯಭೀತರಾಗುವ ಅಗತ್ಯ ಇಲ್ಲ ಎಂದು ಹೇಳಿದ್ದಾರೆ. ಆದರೆ ರೋಗ ನಿರೋಧಕ ಶಕ್ತಿ ಕಡಿಮೆ ಇದ್ದವರು ಸ್ವಲ್ಪ ಎಚ್ಚರಿಕೆಯಿಂದ ಇರಬೇಕು ಎಂದು ತಿಳಿಸಿದ್ದಾರೆ. ಇದೇ ವೇಳೆ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸ್ಥಾನ ಬದಲಾವಣೆ ಕೇಳಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಜಿಲ್ಲೆಯಲ್ಲಿ ಸ್ಥಳೀಯರು ಹಾಗೂ ಪಕ್ಷದ ನಾಯಕರು ಎಲ್ಲಾ ರೀತಿಯ ಸಹಕಾರ ನೀಡುತ್ತಿದ್ದಾರೆ ಎಂದು ಅವರು ತಿಳಿಸಿದ್ದಾರೆ.

<><><><>

ಹೇಮಾವತಿ ಎಕ್ಸ್ ಪ್ರೆಸ್ ಲಿಂಕ್ ಕೆನಾಲ್ ಕಾಮಗಾರಿ ವಿರೋಧಿಸಿ ಪ್ರತಿಭಟನೆ ನಡೆಸಿದ್ದ ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಶಾಸಕ ಸುರೇಶ್ ಗೌಡ ಸೇರಿದಂತೆ ೧೧ ಮಂದಿಯ ವಿರುದ್ಧ ಗುಬ್ಬಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪೊಲೀಸರ ಮೇಲೆ ಹಲ್ಲೆ, ಸಾರ್ವಜನಿಕರಿಗೆ ತೊಂದರೆ, ಸರ್ಕಾರಿ ವಾಹನಗಳಿಗೆ ಹಾನಿ, ರಾಷ್ಟ್ರೀಯ ಹೆದ್ದಾರಿ ಬ್ಲಾಕ್ ಮಾಡಿದ ಆರೋಪದಡಿ ತುಮಕೂರು ನಗರ ಶಾಸಕ ಜ್ಯೋತಿ ಗಣೇಶ್, ತುರುವೇಕೆರೆ ಶಾಸಕ ಎಂ.ಟಿ ಕೃಷ್ಣಪ್ಪ , ಬಿಜೆಪಿ ಜಿಲ್ಲಾಧ್ಯಕ್ಷ ಹೆಬ್ಬಾಕ ರವಿ, ಮುಖಂಡ ದಿಲೀಪ್ ಕುಮಾರ್ ವಿರುದ್ಧ ಪ್ರಕರಣ

ದಾಖಲಾಗಿದೆ. ಪ್ರತಿಭಟನೆ ನಡೆಸುವ ವೇಳೆ ನಿಷೇಧಾಜ್ಞೆ ಉಲ್ಲಂಘಿಸಿ ಕಾಮಗಾರಿ ಸ್ಥಳಕ್ಕೆ ಮುತ್ತಿಗೆ ಹಾಕಿದ್ದ ಹೋರಾಟಗಾರರು ಪೈಪ್ ಧ್ವಂಸಗೊಳಿಸುವ ವೇಳೆ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಅವರಿಗೆ ಗಾಯವಾಗಿತ್ತು. ಈ ಹಿನ್ನೆಲೆಯಲ್ಲಿ ನಿಷೇಧಾಜ್ಞೆ ಉಲ್ಲಂಘನೆ, ಶಾಂತಿ ಭಂಗ ಸೇರಿದಂತೆ ವಿವಿಧ ಕಾರಣಗಳಡಿಯಲ್ಲಿ ೧೧ ಪ್ರಕರಣಗಳು ದಾಖಲಾಗಿದೆ.

<><><><>

ದಕ್ಷಿಣ ಕನ್ನಡ, ಕೊಡಗು ಮೊದಲಾದ ಭಾಗದಲ್ಲಿ ಮಳೆಗೆ ಭೂಕುಸಿತಗಳು ಸಂಭವಿಸುತ್ತಿರುವ ಹಿನ್ನೆಲೆಯಲ್ಲಿ ಪಶ್ಚಿಮಘಟ್ಟದ ಧಾರಣಾ ಸಾಮರ್ಥ್ಯ ಅಧ್ಯಯನ ನಡೆಸಿ ವರದಿ ಸಲ್ಲಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಬಿ ಖಂಡ್ರೆ ಸೂಚನೆ ನೀಡಿದ್ದಾರೆ. ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಲಿಖಿತ ಸೂಚನೆ ನೀಡಿರುವ ಅವರು, ಪಶ್ಚಿಮ ಘಟ್ಟದಲ್ಲಿ ಹಲವು ರಸ್ತೆ, ಮತ್ತಿತರ ಯೋಜನೆಗಳು ಕಾರ್ಯಗತವಾಗುತ್ತಿದ್ದು, ಇದರಿಂದ ಘಟ್ಟ ಅಪಾಯಕ್ಕೆ ಸಿಲುಕಿದೆ. ಆಸ್ತಿಹಾನಿ, ಬೆಳೆ ಹಾನಿ, ಜೀವಹಾನಿಯ ಜೊತೆಗೆ ವನ್ಯ ಜೀವಿಗಳೂ ಸಂಕಷ್ಟ ಎದುರಿಸುವಂತಾಗಿದೆ ಎಂದು ತಜ್ಞರು ಆತಂಕ ವ್ಯಕ್ತಪಡಿಸಿರುವುದಾಗಿ ಅವರು ತಿಳಿಸಿದ್ದಾರೆ. ಪಶ್ಚಿಮಘಟ್ಟಕ್ಕೆ ತೊಂದರೆಯಾದರೆ ಮುಂಬರುವ ದಿನಗಳಲ್ಲಿ ತೀವ್ರ ಜಲಕ್ಷಾಮ ಎದುರಾಗುವ ಭೀತಿ ಇದೆ ಎಂಬ ತಜ್ಞರ ಅಭಿಪ್ರಾಯ ಉಲ್ಲೇಖಿಸಿರುವ ಅವರು ಈ ನಿಟ್ಟಿನಲ್ಲಿ ಅಧ್ಯಯನ ಮಾಡಿ ೩ ತಿಂಗಳೊಳಗೆ ಪಶ್ಚಿಮಘಟ್ಟದ ಧಾರಣ ಸಾಮರ್ಥ್ಯದ ಬಗ್ಗೆ ವರದಿ ಸಲ್ಲಿಸಲು ಸೂಚಿಸಿದ್ದಾರೆ.

<><><><>

ಕರ್ನಾಟಕದ ಮುಖ್ಯಮಂತ್ರಿಯವರ ಕಚೇರಿ ಮಳೆ ಹಾನಿ ಕುರಿತ ವರದಿಯನ್ನು ಬಿಡುಗಡೆ ಮಾಡಿದೆ. ಮೇ ತಿಂಗಳಿನಲ್ಲಿ ಸುರಿದ ಭಾರೀ ಮಳೆಯು ಕಳೆದ ೧೨೫ ವರ್ಷಗಳಲ್ಲಿ ಅತ್ಯಧಿಕ ಮಳೆಯಾಗಿದೆ. ಒಟ್ಟಾರೆ ಈ ಮುಂಗಾರು ಸಂದರ್ಭದಲ್ಲಿ ೨೧೯ ಮಿಲಿಮೀಟರ್ ಮಳೆಯಾಗಿರುವುದಾಗಿ ತಿಳಿದುಬಂದಿದೆ. ಏಪ್ರಿಲ್ ೧ ರಿಂದ ಮೇ ೩೧ರವರೆಗಿನ ಅತಿವೃಷ್ಠಿಯಿಂದ ೪೮ ಮಂದಿ ಮೃತಪಟ್ಟಿರುವುದಾಗಿ ವರದಿಯಾಗಿದೆ. ಒಟ್ಟು ೨ ಸಾವಿರದ ೬೮ ಮನೆಗಳು ಕುಸಿದಿದ್ದು, ೧೫ ಸಾವಿರದ ೩೭೮ ಹೆಕ್ಟೇರ್‌ಗಳಷ್ಟು ಫಸಲು ನಾಶವಾಗಿದೆ ಎಂದು ತಿಳಿದು ಬಂದಿದೆ.

<><><><>

ಬೆಂಗಳೂರಿನ ಕೆ.ಆರ್. ಮಾರುಕಟ್ಟೆಯ ಸುತ್ತಮುತ್ತಲಿನ ಪ್ರದೇಶ ಹಾಗೂ ರಸ್ತೆಗಳಲ್ಲಿ ಸ್ವಚ್ಛತೆ ಕಾಪಾಡಲು ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಕೆ.ಆರ್ ಮಾರುಕಟ್ಟೆಗೆ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ಕೆ.ಆರ್ ಮಾರುಕಟ್ಟೆ ಸುತ್ತಮುತ್ತಲಿನ ಪ್ರದೇಶಗಳು ಮತ್ತು ರಸ್ತೆಗಳನ್ನು ಪ್ರೆಶರ್ ಜೆಟ್ಟಿಂಗ್ ಯಂತ್ರಗಳ ಮೂಲಕ ಸ್ವಚ್ಛಗೊಳಿಸಲು ಸೂಚಿಸಿದ್ದಾರೆ. ಮಾರುಕಟ್ಟೆಯಲ್ಲಿ ಉತ್ಪತ್ತಿ ಆಗುವ ತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡಬೇಕು. ಎಲ್ಲಿಯೂ ತ್ಯಾಜ್ಯ ಬಿಸಾಡದಂತೆ ನೋಡಿಕೊಂಡು ಸದಾ ಸ್ವಚ್ಛತೆಯಿರುವಂತೆ ನೋಡಿಕೊಳ್ಳಲು ಮಾರ್ಷಲ್ ಮೇಲ್ವಿಚಾರಕರಿಗೆ ನಿರ್ದೇಶನ ನೀಡಿದ್ದಾರೆ. ಇದೇ ವೇಳೆ ಸಂಚಾರಿ ಪೊಲೀಸ್ ವಿಭಾಗ ವಶಪಡಿಸಿಕೊಂಡಿರುವ ವಾಹನಗಳನ್ನು ಸಂಚಾರಿ ಪೊಲೀಸ್ ಸಹಯೋಗದೊಂದಿಗೆ ತೆರವುಗೊಳಿಸಲು ಮಹೇಶ್ವರ್ ರಾವ್ ಸೂಚನೆ ನೀಡಿದ್ದಾರೆ.

<><><><>

೧೧ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಹಿನ್ನೆಲೆಯಲ್ಲಿ ಕೇಂದ್ರ ಆಯುಷ್ ಇಲಾಖೆ ಹಾಗೂ ಮೈಸೂರು ಜಿಲ್ಲಾ ಪಂಚಾಯತ್ ಸಂಯುಕ್ತಾಶ್ರಯದಲ್ಲಿ ಲಲಿತ ಮಹಲ್ ಅರಮನೆ ಮುಂಭಾಗ ಯೋಗ ಧನುಷ್ ಕಾರ್ಯಕ್ರಮ  ನಡೆಯಿತು. ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಹಿನ್ನೆಲೆಯಲ್ಲಿ ಇಂದು ಪೂರ್ವಭಾವಿಯಾಗಿ ಯೋಗ ಆಯುಷ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.  ಮುಂದಿನ ದಿನಗಳಲ್ಲಿ ಮತ್ತಷ್ಟು ಪೂರ್ವಭಾವಿ ಯೋಗ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಯಶಸ್ವಿಗೊಳಿಸುವುದೇ ಈ ಕಾರ್ಯಕ್ರಮಗಳ ಮೂಲ ಉದ್ದೇಶವಾಗಿದೆ ಈ ಕಾರ್ಯಕ್ರಮ ಯೋಗ ಸಂಸ್ಥೆಗಳ ನೆರವಿನಿಂದ ಯಶಸ್ವಿಯಾಗಿ ನಡೆಯುತ್ತಿದೆ ಎಂದು  ಜಿಲ್ಲಾ ಆಯುಷ್ ಅಧಿಕಾರಿ ಡಾ.ರೇಣುಕಾದೇವಿ ತಿಳಿಸಿದ್ದಾರೆ.

<><><><>

ಬೆಳೆಗಳಲ್ಲಿ ರೋಗ ನಿಯಂತ್ರಣ ಶಕ್ತಿ ಹೆಚ್ಚಿಸಲು, ಮಣ್ಣಿನಲ್ಲಿರುವ ಪೋಷಕಾಂಶಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಲು ಹಾಗೂ ಕೀಟನಾಶಕ ಸಿಂಪಡಣೆಗಳ ಸಂಖ್ಯೆ ಕಡಿತಗೊಳಿಸಲು ಬೀಜೋಪಚಾರ ಮಾಡುವುದು ಅನಿವಾರ್ಯ ಎಂದು ಯಾದಗಿರಿ ಉಪ ಕೃಷಿ ನಿರ್ದೇಶಕಿ ಮಂಜುಳಾ ತಿಳಿಸಿದ್ದಾರೆ. ಮುಂಗಾರು ಹಂಗಾಮಿನಲ್ಲಿ ತೊಗರಿ, ಹೆಸರು ಬಿತ್ತನೆ ಬೀಜಗಳಿಗೆ ಬೀಜೋಪಚಾರದ ವಿಧಾನ ಕೈಗೊಳ್ಳಬೇಕು. ಜೈವಿಕ ನಿಯಂತ್ರಣಕಗಳಿಂದ ವಾತಾವರಣದಲ್ಲಿರುವ ಸಾರಜನಕ ಬೆಳೆಗಳಿಗೆ ದೊರೆಯುತ್ತದೆ. ಈ ರೀತಿ ಉಪಚರಿಸಿದ ಬೀಜಗಳನ್ನು ೫ ರಿಂದ ೭ ಸೆಂ.ಮೀ ಆಳದ ಮಣ್ಣಿನಲ್ಲಿ ಬೀಳುವಂತೆ ಬಿತ್ತನೆ ಮಾಡಬೇಕು ಎಂದು ಅವರು ತಿಳಿಸಿದ್ದಾರೆ.

<><><><>

ಕಮಲ್ ಹಾಸನ್ ನಟ ಎನ್ನುವುದಕ್ಕಿಂತ ಒಬ್ಬ ರಾಜಕಾರಣಿ ಹೀಗಾಗಿ ತನಗೆ ಮತ ಬೇಕೆಂದು ಮತ್ತೊಂದು ಭಾಷೆಯ ಬಗ್ಗೆ ಹಗುರವಾಗಿ ಮಾತಾಡುವುದು ಸರಿಯಲ್ಲ ಎಂದು ಮಾಜಿ ಸಚಿವ ಆರಗ ಜ್ಞಾನೇಂದ್ರ ಶಿವಮೊಗ್ಗದಲ್ಲಿ ತಿಳಿಸಿದ್ದಾರೆ. ಇನ್ನೊಂದೆಡೆ, ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಮಾತಾನಾಡಿದ ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಕನ್ನಡದ ಬಗ್ಗೆ ಹಗುರವಾಗಿ ಮಾತನಾಡಿರುವ ನಟ ಕಮಲಹಾಸನ್ ಅವರ ವಿರುದ್ಧ ರಾಜ್ಯ ಸರ್ಕಾರ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಳ್ಳಬೇಕೆಂದು ಒತ್ತಾಯಿಸಿದ್ದಾರೆ.

<><><><>

ರಾಜ್ಯದ ಹಲವೆಡೆ ಇಂದು ಗುಡುಗು ಮಿಂಚು ಸಹಿತ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರಾವಳಿ ಕರ್ನಾಟಕಾದಾದ್ಯಂತ ನೈರುತ್ಯ ಮಾನ್ಸೂನ್ ಸಾಮಾನ್ಯವಾಗಿದ್ದು ಒಳನಾಡಿನಲ್ಲಿ ದುರ್ಬಲವಾಗಿತ್ತು. ಬಂಟ್ವಾಳ, ಕ್ಯಾಸಲ್‌ರಾಕ್ ನಲ್ಲಿ ೪ ಸೆಂ.ಮೀ ಮಳೆಯಾಗಿದೆ. ಇಂದು ಉತ್ತರಕನ್ನಡ ದಕ್ಷಿಣ ಕನ್ನಡ ಉಡುಪಿ ಜಿಲ್ಲೆಗಳಲ್ಲಿ ಬಹುತೇಕ ಕಡೆ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ. ಬೆಂಗಳೂರಿನಲ್ಲಿ ಬಾಗಶಃ ಮೋಡ ಕವಿದ ವಾತಾವರಣ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>